ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 24-04-2017

# ಪತ್ರಿಕಾ ಆಮಂತ್ರಣ

1. ಪತ್ರಿಕಾಗೋಷ್ಠಿ:

ಶ್ರೀಮತಿ ಆರತಿ ಕೃಷ್ಣ,

ಉಪಾಧ್ಯಕ್ಷರು, ಅನಿವಾಸಿ ಭಾರತೀಯರ ಸಮಿತಿ, ಕರ್ನಾಟಕ

ದಿನಾಂಕ: 25-4-2017 ಮಂಗಳವಾರ ಬೆಳಿಗ್ಗೆ 11-30 ಗಂಟೆಗೆ

ಸ್ಥಳ: ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣ,

ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು

2. ಪತ್ರಿಕಾಗೋಷ್ಠಿ:

ಪ್ರೊ. ಎಸ್.ಜಿ. ಸಿದ್ಧರಾಮಯ್ಯ,
ಅಧ್ಯಕ್ಷರು,
ಕನ್ನಡ ಅಭಿವೃದ್ಧಿ ಪ್ರಾಧಿಕಾರ

ದಿನಾಂಕ: 25-04-2017, ಮಂಗಳವಾರ, ಸಮಯ: ಮಧ್ಯಾಹ್ನ 12-00 ಗಂಟೆಗೆ

ಸ್ಥಳ: ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರ ಕೊಠಡಿ ಸಂಖ್ಯೆ 206, 2ನೇ ಮಹಡಿ,
ವಿಧಾನಸೌಧ, ಬೆಂಗಳೂರು

3. ಪತ್ರಿಕಾಗೋಷ್ಠಿ:

ರಾಜ್ಯ ಪತ್ರಾಗಾರ ಇಲಾಖೆ ನಿರ್ದೇಶಕ ಕೆ.ಎ. ದಯಾನಂದ,

ದಿನಾಂಕ: 25-4-2017 ಮಂಗಳವಾರ ಅಪರಾಹ್ನ 12.00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 222, ವಿಕಾಸ ಸೌಧ, ಬೆಂಗಳೂರು

4. ರಾಜ್ಯ-ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಕನ್ನಡ ಚಲನ ಚಿತ್ರಗಳ ಉತ್ಸವ:

ಉದ್ಘಾಟನೆ:

ಡಾ: ಜಿ. ಪರಮೇಶ್ವರ್,

ಗೃಹ ಸಚಿವರು,

ದಿನಾಂಕ: 25-4-2017 ಮಂಗಳವಾರ ಸಂಜೆ 4-00 ಗಂಟೆಗೆ

ಸ್ಥಳ: ಚಾಮುಂಡೇಶ್ವರಿ ಸ್ಟುಡಿಯೋ, ಮಿಲ್ಲರ್ಸ್ ರಸ್ತೆ, ಬೆಂಗಳೂರು

5. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ದಿ ನಿಗಮ ನಿಯಮಿತದಿಂದ

ಅರಿವು version 2.0 ತಂತ್ರಾಂಶ

ಉದ್ಘಾಟನೆ:

ಸಿದ್ದರಾಮಯ್ಯ,

ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ: 25-4-2017 ಮಂಗಳವಾರ ಸಂಜೆ 6-00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 313, 3 ನೇ ಮಹಡಿ, ವಿಧಾನ ಸೌಧ, ಬೆಂಗಳೂರು

## ಪತ್ರಿಕಾ ಪ್ರಕಟಣೆ

# ಬಿ.ಟಿ. ಹತ್ತಿ ಬೆಳೆಯಲ್ಲಿ ಗುಲಾಬಿ ಕಾಯಿಕೊರಕದ ಹತೋಟಿಗೆ ಪ್ರಮುಖ ನಿರ್ವಹಣಾ ಕ್ರಮಗಳು

ಬೆಂಗಳೂರು, ಏಪ್ರಿಲ್ 24. (ಕರ್ನಾಟಕ ವಾರ್ತೆ)

ಬಿ.ಟಿ. ಹತ್ತಿ ಬೆಳೆಯಲ್ಲಿ ಗುಲಾಬಿ ಕಾಯಿಕೊರಕದ ಹತೋಟಿಗೆ ಈ ಕೆಳಕಂಡಂತೆ ಪ್ರಮುಖ ನಿರ್ವಹಣಾ ಕ್ರಮಗಳನ್ನು ತೆಗೆದುಕೊಳ್ಳಲು ಕೃಷಿ ಇಲಾಖೆ ರೈತರಲ್ಲಿ ಮನವಿ ಮಾಡಿದೆ.

ಜಮೀನು ನಿರ್ಮಲೀಕರಣ: ಬೇಸಿಗೆಯಲ್ಲಿ ಆಳವಾಗಿ ಉಳುಮೆ ಮಾಡುವುದು. ತೆರೆಯದ ಮತ್ತು ಅರ್ಧ ತೆರೆದಿರುವ ಕಾಯಿಗಳನ್ನು ಹತ್ತಿ ಗಿಡದಿಂದ ಕಿತ್ತು ನಾಶಪಡಿಸುವುದು.

ಜಿನ್ ನಿರ್ಮಲೀಕರಣ: ಜಿನ್ನಿಂಗ್ ಮಾಡಿದ ನಂತರ ಬಾಧೆಗೆ ತುತ್ತಾದ ಹತ್ತಿ ಬೀಜಗಳನ್ನು ನಾಶ ಮಾಡುವುದರಿಂದ ಈ ಬೀಜಗಳಲ್ಲಿ ಸುಪ್ತಾವಸ್ಥೆಯಲ್ಲಿರುವ ಮರಿಹುಳುಗಳನ್ನು ನಾಶಮಾಡಬಹುದಾಗಿರುತ್ತದೆ. ಜಿನ್ನಿನಲ್ಲಿ ಲಿಂಗಾಕರ್ಷಕ ಬಲೆಗಳನ್ನು ಸ್ಥಾಪಿಸುವುದು ಸೂಕ್ತವಾಗಿರುತ್ತದೆ.

ಬಿತ್ತನೆ ಕಾಲಾವಧಿ ಬಹಳ ಮುಖ್ಯವಾಗಿರುವುದರಿಂದ ವಲಯವಾರು sowing window ಮಾಹಿತಿ ಪಡೆದು ಅದರಂತೆ ಬಿತ್ತನೆ ಮಾಡುವುದು.

ಬಿ.ಟಿ. ಹತ್ತಿಯ ಜೊತೆಗೆ ಬಿ.ಟಿ. ರಹಿತ ಹತ್ತಿಯನ್ನು ಆಶ್ರಯ ಬೆಳೆಯಾಗಿ ಬೆಳೆಯುವುದು.

ಜಮೀನಿನಲ್ಲಿ ಜೊತೆಗೆ ಬಿ.ಟಿ. ರಹಿತ ಹತ್ತಿಯನ್ನು ಆಶ್ರಯ ಬೆಳೆಯಾಗಿ ಬೆಳೆಯುವುದು.

ಜಮೀನಿನನಲ್ಲಿ ಲಿಂಗಾಕರ್ಷಕ ಬಲೆಗಳನ್ನು ಹೂ ಬಿಡುವ ಹಂತದಲ್ಲಿ ಉಪಯೋಗಿಸುವುದು. (20 ರಿಂದ 35 ಬಲೆಗಳು ಪ್ರತಿ ಹೆಕ್ಟೇರ್‌ಗೆ)

100 ದಿನಗಳ ಕಡಿಮೆ ಇರುವ ಬೆಳೆಯಲ್ಲಿ ಹೂ ಬಿಡುವ ಹಂತದಲ್ಲಿ ಪ್ರೊಫೆನೋಫಾಸ್ ಕೀಟನಾಶಕವನ್ನು ಸಿಂಪಡಿಸುವುದರಿಂದ ಶೇ. 50 ರಷ್ಟು ನಷ್ಟವನ್ನು ಕಡಿಮೆಗೊಳಿಸಬಹುದಾಗಿದೆ.

100 ದಿನಗಳಿಗಿಂತ ಹೆಚ್ಚಿನ ಕಾಲಾವಧಿಯಾಗಿರುವ ಬೆಳೆಯಲ್ಲಿ ಫೈರಾತ್ರೈಡ್ ಕೀಟನಾಶಕವನ್ನು ಸಿಂಪಡಿಸುವುದರಿಂದ ನಷ್ಟವನ್ನು ಕಡಿಮೆಗೊಳಿಸುತ್ತದೆ (ಲ್ಯಾಮ್‌ಡಾ/ಸೈಪರ್‌ಮೆತ್ರಿನ್ 0.5 ಎಂ.ಎಲ್. ಪ್ರತಿ ಲೀಟರ್‌ಗೆ)

ಎಸ್‌ಎಂ/ಕೆಎಂ

## ಪೌರಾಡಳಿತ ಸಚಿವರ ಪ್ರವಾಸ

ಬೆಂಗಳೂರು, ಏಪ್ರಿಲ್ 24. (ಕರ್ನಾಟಕ ವಾರ್ತೆ)

ಪೌರಾಡಳಿತ ಹಾಗೂ ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವ  ಸಚಿವ ಈಶ್ವರ ಬಿ. ಖಂಡ್ರೆ ಅವರು ಏಪ್ರಿಲ್ 25 ರಂದು ಬೆಂಗಳೂರಿನಿಂದ ಹೊರಟು ಚಿತ್ರದುರ್ಗ  ನಗರಸಭಾ ವತಿಯಿಂದ ಆಯೋಜಿಸಿರುವ ವಿವಿಧ ಅಭಿವೃದ್ಧಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

ಎಸ್‌ಎಂ/ಕೆಎಂ

## ಬಾಲಭವನದಲ್ಲಿ ಓರಿಯಂಟೇಷನ್ ಕೋರ್ಸ್

ಬೆಂಗಳೂರು, ಏಪ್ರಿಲ್ 24. (ಕರ್ನಾಟಕ ವಾರ್ತೆ)

ಮಕ್ಕಳಲ್ಲಿ ಆತ್ಮವಿಶ್ವಾಸ, ಭರವಸೆ, ಸಾಹಸಗಳನ್ನು ಮೂಡಿಸುವ ನಿಟ್ಟಿನಲ್ಲಿ ಮಕ್ಕಳಿಗೆ ಸಾಹಸ ಕ್ರೀಡೆ ಮತ್ತು ಸಾಹಸ ಚಟುವಟಿಕೆಗಳಿಗೆ ಸಂಬಂಧಿಸಿದಂತೆ, ಒಂದು ದಿನದ ಓರಿಯಂಟೇಷನ್ ಕೋರ್ಸ್‌ಅನ್ನು ಬಾಲ ಭವನದ ಆವರಣದಲ್ಲಿ GETHNAA ಸಂಸ್ಥೆ ಸಹಯೋಗದೊಂದಿಗೆ ಏಪ್ರಿಲ್ 2017 ರಿಂದ ಪ್ರತಿ ಭಾನುವಾರ 08–13 ವರ್ಷದ ಮಕ್ಕಳಿಗೆ ಹಮ್ಮಿಕೊಳ್ಳಲು ಯೋಜಿಸಿದೆ.

ಈ ಕಾರ್ಯಕ್ರಮದಲ್ಲಿ ಶಿಭಿರಾರ್ಥಿಗಳಿಗೆ ಸಾಹಸ ಕ್ರೀಡೆ ಹಾಗೂ ಚಟುವಟಿಕೆಗಳಿಗೆ ಉಪಯೋಗಿಸುವ ಹಾರ್ಡ್ ಗೇರ್ ಹಾಗೂ ಆಟಿಕೆಗಳ, ಟೆಂಟ್ ನೆಡುವುದು, ಸೇತುವೆ ಕಟ್ಟುವುದು ಹಾಗೂ ಹಗ್ಗಗಳ ನಿರ್ವಹಣೆ, ಜೀವ ಸುರಕ್ಷತಾ ಜ್ಯಾಕೆಟ್‌ಗಳ ಬಳಕೆ, ರ್‍ಯಾಪ್ಟಿಂಗ್, ಕ್ಯಾಂಪ್ ಫೈರ್ ಇತ್ಯಾದಿಗಳಿಗೆ ಸಂಬಂಧಿಸಿದಂತೆ, ಪರಿಚಯ ಹಾಗೂ ಅರಿವು ಮೂಡಿಸಲಾಗುವುದು.

ಆಸಕ್ತರು ಹೆಚ್ಚಿನ ವಿವರಗಳಿಗೆ ಹಾಗೂ ನೋಂದಣಿಗಾಗಿ ಕಾರ್ಯದರ್ಶಿಗಳ ಕಛೇರಿ, ಬಾಲ ಭವನ, ಕಬ್ಬನ್ ಉದ್ಯಾನವನ, ಬೆಂಗಳೂರು –560 001 ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080– 22864189/ 22861423 ಅಥವಾ ಇಮೇಲ್ email-secybalbhavan.bng@gmail.com ರ ಮೂಲಕ ಸಂಪರ್ಕಿಸಲು ಕೋರಿದೆ.

ಎಸ್‌ಎಂ/ಕೆಎಂ

## ರಾಜಕುಮಾರ್ ಸಮಾಧಿಯ ಸ್ಥಳ ಪ್ರವಾಸಿಗರ ಆಕರ್ಷಣೆ ತಾಣ –ಕೆ.ಜೆ. ಜಾರ್ಜ್

ಬೆಂಗಳೂರು, ಏಪ್ರಿಲ್ 24. (ಕರ್ನಾಟಕ ವಾರ್ತೆ)

ಡಾ: ರಾಜ್‌ಕುಮಾರ್ ಅವರ ಆದರ್ಶಗಳನ್ನು ಎಲ್ಲರೂ ಪಾಲಿಸುವಂತಾಗಬೇಕು. ಅವರು ಜಗತ್ತು ಕಂಡಂತಹ ಅದ್ಭುತ ಕಲಾವಿದ, ಕಂಠೀರವ ಸ್ಟುಡಿಯೋದಲ್ಲಿರುವ ಅವರ ಸಮಾಧಿಯು ದೇಶ ವಿದೇಶಗಳ ಪ್ರವಾಸಿಗರ ತಾಣವಾಗಿದೆ ಎಂದು ಬೆಂಗಳೂರು ಅಭಿವೃದ್ಧಿ ಸಚಿವ ಶ್ರೀ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ಇಂದು ರವೀಂದ್ರ ಕಲಾಕ್ಷೇತ್ರದಲ್ಲಿ ಕರ್ನಾಟಕ ಚಲನಚಿತ್ರ ಅಕಾಡೆಮಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ನಡೆದ ಡಾ: ರಾಜ್‌ಕುಮಾರ್ 89 ನೇ ಜನ್ಮದಿನದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಾ ಡಾ: ರಾಜ್‌ಕುಮಾರ್ ಅವರ ಜೀವನದ ಮೌಲ್ಯಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕಿವಿಮಾತನ್ನು ನುಡಿದರು.

ನಾನು ಈ ಕಾರ್ಯಕ್ರಮಕ್ಕೆ ಸಂಸದನಾಗಿ, ಸಚಿವನಾಗಿ ಬಂದಿಲ್ಲ. ಡಾ: ರಾಜ್‌ಕುಮಾರ್ ಅವರ ಅಭಿಮಾನಿಯಾಗಿ ಬಂದಿದ್ದೇನೆ ಎಂದು ಕೇಂದ್ರ ರಾಸಾಯನಿಕ ಹಾಗೂ ರಸಗೊಬ್ಬರ ಖಾತೆ ಸಚಿವ ಅನಂತ್‌ಕುಮಾರ್ ಅವರು ನುಡಿದರು.

ಜಗತ್ತಿನ ಎಲ್ಲಾ ನಾಗರಿಕರ ಡಾ: ರಾಜ್‌ಕುಮಾರ್ ಅವರ ಸಿನಿಮಾಗಳು ಅವರು ಹಾಡಿರುವ ಹಾಡುಗಳು ಡಿಜಿಟಲಿಕರಣವಾಗಬೇಕು ಆ ರೀತಿ ರಾಜ್ಯ, ಕೇಂದ್ರ ಸರ್ಕಾರ ಮತ್ತು ಡಾ: ರಾಜ್‌ಕುಮಾರ್ ಅವರ ಕುಟುಂಬದವರು ಸಹ ಶ್ರಮಿಸಿ ಅವರ ಜೀವನದ ಮೌಲ್ಯಗಳನ್ನು ಅಂತಾರಾಷ್ಟ್ರೀಯಮಟ್ಟದಲ್ಲಿ ಪ್ರಚಾರಪಡಿಸಬೇಕು ಎಂದರು.

ಸಮಾಜದಲ್ಲಿ ಎಲ್ಲಾ ವರ್ಗದ ಜನರಿಗೆ ಇಷ್ಟವಾಗುವ ವ್ಯಕ್ತಿ ಎಂದರೆ ಡಾ: ರಾಜ್‌ಕುಮಾರ್ ಏಕೆಂದರೆ ಅವರು ಯಾವ ಜಾತಿ, ವರ್ಗದ ಭೇದವಿಲ್ಲದೆ ಸಾರ್ವತ್ರಿಕವಾಗಿ ಎಲ್ಲರನ್ನೂ ಪ್ರೀತಿಸುತ್ತಿದ್ದರು. ಆದ್ದರಿಂದ ಅವರು ಯಾವ ಜಾತಿಗೂ ಸೀಮಿತವಾಗದ ಶ್ರೇಷ್ಠ ವ್ಯಕ್ತಿಯಾದರು ಎಂದು ಖ್ಯಾತ ಸಾಹಿತಿ ಡಾ: ಬರಗೂರು ರಾಮಚಂದ್ರಪ್ಪ ಅವರು ನುಡಿದರು.

ಡಾ: ರಾಜ್‌ಕುಮಾರ್ ಅವರು ನಾಡುಕಂಡ ಸರ್ವಶ್ರೇಷ್ಟ ನಟ ಏಕೆಂದರೆ ಅಣ್ಣತಮ್ಮಂದಿರು, ಅಕ್ಕತಂಗಿಯರು, ನೆರೆಹೊರೆಯವರು ಇನ್ನೂ ಮುಂತಾದ ವರ್ಗದವರು ಯಾವ ಯಾವ ರೀತಿ ನೆಮ್ಮದಿಯಿಂದ ಸಮಾಜಕ್ಕೆ ತೊಂದರೆಯಾಗದ ರೀತಿ ಬದುಕಬೇಕು ಎಂದು ಅವರು ಅಭಿನಯಿಸುವ ಚಿತ್ರದ ಮುಖಾಂತರ ಸಮಾಜಕ್ಕೆ ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಶಿವರಾಜ್‌ಕುಮಾರ್, ರಾಘವೇಂದ್ರ ರಾಜ್‌ಕುಮಾರ್, ಪುನೀತ್ ರಾಜ್‌ಕುಮಾರ್, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ರಾಜೇಂದ್ರಸಿಂಗ್ ಬಾಬು,

ಕಂಠೀರವ ಸ್ಟುಡಿಯೋಸ್ ಅಧ್ಯಕ್ಷೆ ಅಶ್ವಿನಿ ಕೃಷ್ಣಮೂರ್ತಿ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು, ಹಿರಿಯ ನಟಿ ಜಯಂತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಅವರು ಉಪಸ್ಥಿತರಿದ್ದರು.

ಎಸ್‌ಎಂ/ಕೆವಿ/ಕೆಎಂ

# ರಾಷ್ಟ್ರ-ರಾಜ್ಯ ಪ್ರಶಸ್ತಿ ಪುರಸ್ಕೃತ ಹಾಗೂ ಪನೋರಮಾ ಕನ್ನಡ ಚಿತ್ರಗಳ ಉತ್ಸವ

**ಬೆಂಗಳೂರು, ಏಪ್ರಿಲ್ 24 (ಕರ್ನಾಟಕ ವಾರ್ತೆ)**

ಕರ್ನಾಟಕ ಚಲನಚಿತ್ರ ಅಕಾಡೆಮಿಯು "ರಾಷ್ಟ್ರ-ರಾಜ್ಯ ಪ್ರಶಸ್ತಿ ಪುರಸ್ಕೃತ ಹಾಗೂ ಪನೋರಮಾ ಚಿತ್ರೋತ್ಸವ ಆಯ್ಕೆಯಾದ ಕನ್ನಡ ಚಿತ್ರಗಳ ಉತ್ಸವವನ್ನು ಏಪ್ರಿಲ್ 25 ರಿಂದ 29 ರವರೆಗೆ ಚಾಮುಂಡೇಶ್ವರಿ ಸ್ಟುಡಿಯೋಸ್, ಮಿಲ್ಲರ್ಸ್ ರಸ್ತೆ, ಬೆಂಗಳೂರು ಇಲ್ಲಿ ಆಯೋಜಿಸಿದೆ.

ಗೃಹ ಸಚಿವ ಡಾ: ಜಿ. ಪರಮೇಶ್ವರ ಅವರು ಏಪ್ರಿಲ್ 25 ರಂದು ಸಂಜೆ 4.00 ಗಂಟೆಗೆ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಈ ಚಿತ್ರೋತ್ಸವಕ್ಕೆ ಚಾಲನೆ ನೀಡಲಿದ್ದಾರೆ.

ಮುಖ್ಯ ಅತಿಥಿಯಾಗಿ ಹಿರಿಯ ಕಲಾವಿದೆ ಡಾ: ಜಯಮಾಲಾ ಉಪಸ್ಥಿತರಿರುವರು. ಪದ್ಮಶ್ರೀ ಪುರಸ್ಕೃತ ಖ್ಯಾತ ಚಲನಚಿತ್ರ ನಿರ್ದೇಶಕ ಗಿರೀಶ್ ಕಾಸರವಳ್ಳಿ ಅವರು ಪ್ರಧಾನ ಭಾಷಣ ಮಾಡಲಿದ್ದು, ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್.ವಿ. ರಾಜೇಂದ್ರಸಿಂಗ್ ಬಾಬು ಅವರು ವಹಿಸುವರು.

ಸಮಾರಂಭದ ವಿಶೇಷ ಆಹ್ವಾನಿತರಾಗಿ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು, 2016 ನೇ ಸಾಲಿನ ಅತ್ಯುತ್ತಮ ನಟ ಪ್ರಶಸ್ತಿ ಪುರಸ್ಕೃತ ಶ್ರೀ ಅಚ್ಯುತ್‌ಕುಮಾರ್, 2016 ನೇ ಸಾಲಿನ ಅತ್ಯುತ್ತಮ ನಟಿ ಪ್ರಶಸ್ತಿ ಪುರಸ್ಕೃತ ಕುಮಾರಿ ಶ್ರುತಿ ಹರಿಹರನ್ ಅವರು ಭಾಗವಹಿಸುವರು ಉದ್ಘಾಟನಾ ಸಮಾರಂಭದ ನಂತರ "ಅನಲ" ಕಿರುಚಿತ್ರ ಹಾಗೂ "ರೈಲ್ವೇ ಚಿಲ್ಡ್ರನ್" ಚಿತ್ರ ಹಾಗೂ ಪ್ರದರ್ಶನಗೊಳ್ಳಲಿವೆ.

<u>ಪ್ರದರ್ಶನಗೊಳ್ಳುವ ಚಿತ್ರಗಳು:</u>

**ಏಪ್ರಿಲ್ 26 ರಂದು ಬೆಳಿಗ್ಗೆ 11-00 ಗಂಟೆಗೆ "ರಿಸರ್ವೇಶನ್" ಮಧ್ಯಾಹ್ನ 2-30 ಗಂಟೆಗೆ "ಮದಿಪು", ಸಂಜೆ 5-00 ಗಂಟೆಗೆ "ಅಮರಾವತಿ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ.**

**ಏಪ್ರಿಲ್ 27 ರಂದು ಬೆಳಿಗ್ಗೆ 11-00 ಗಂಟೆಗೆ "ಜೀರ್‌ಜಿಂಬೆ", ಮಧ್ಯಾಹ್ನ 2-30 ಗಂಟೆಗೆ "ರಾಮ ರಾಮಾ ರೇ", ಸಂಜೆ 5-00 ಗಂಟೆಗೆ "ಅಂತರ್ಜಲ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ.**

**ಏಪ್ರಿಲ್ 28 ರಂದು ಬೆಳಿಗ್ಗೆ 11-00 ಗಂಟೆಗೆ "ಅಲ್ಲಮ", ಮಧ್ಯಾಹ್ನ 2-30 ಗಂಟೆಗೆ "ಹರಿಕಥಾ ಪ್ರಸಂಗ", ಸಂಜೆ 5-00 ಗಂಟೆಗೆ "ಮೂಡ್ಲ ಸೀಮೆಯಲಿ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ.**

**ಏಪ್ರಿಲ್ 29 ರಂದು ಮಧ್ಯಾಹ್ನ 2-30 ಗಂಟೆಗೆ "ಯು ಟರ್ನ್", ಸಂಜೆ 5-00 ಗಂಟೆಗೆ "ಕಿರಿಕ್ ಪಾರ್ಟಿ" ಚಲನಚಿತ್ರ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

**ಎಂಎಸ್/ಕೆಎಂ**

ಛಾಯಾಚಿತ್ರ ಶೀರ್ಷಿಕೆ:

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್.ಕೆ. ಪಾಟೀಲ ಅವರು ಏಪ್ರಿಲ್ 24 ರಂದು ಲಕ್ನೋ ದಲ್ಲಿ ನಡೆದ ಸಮಾರಂಭದಲ್ಲಿ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಂದ ಪಂಚಾಯತ್ ರಾಜ್ ಕ್ಷೇತ್ರದಲ್ಲಿನ ಸಾಧನೆಗಾಗಿ ರಾಷ್ಟ್ರೀಯ ಇ-ಪುರಸ್ಕಾರ್ ಸ್ವೀಕರಿಸಿದರು. ರಾಜ್ಯವು ಸತತ ಮೂರನೇ ಬಾರಿಗೆ ಈ ಪ್ರಶಸ್ತಿಗೆ ಆಯ್ಕೆಯಾಗಿದೆ.

# ರಾಜ್ಯಕ್ಕೆ ಪಂಚಾಯತ್‌ರಾಜ್ ಪ್ರಶಸ್ತಿಗಳು

**ಬೆಂಗಳೂರು, ಏಪ್ರಿಲ್ 24 (ಕರ್ನಾಟಕ ವಾರ್ತೆ)**

ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ  ಮಾಹಿತಿ ಮತ್ತು ಸಂವಹನ ತಂತ್ರಜ್ಞಾನದ ಸಮರ್ಥ ಬಳಕೆಗಾಗಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್.ಕೆ. ಪಾಟೀಲ ಅವರು ಇಂದು ಲಕ್ನೋನಲ್ಲಿ ರಾಷ್ಟ್ರೀಯ ಇ-ಪುರಸ್ಕಾರ್ ಪ್ರಶಸ್ತಿಯನ್ನು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಂದ ಸ್ವೀಕರಿಸಿದರು.

ರಾಜ್ಯವು ಸತತ ಮೂರನೇ ಬಾರಿಗೆ ಈ ಪ್ರಶಸ್ತಿಯನ್ನು ಪಡೆಯುತ್ತಿದ್ದು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ನಾಗಾಂಬಿಕ ದೇವಿ ಅವರು ಸಹ ಹಾಜರಿದ್ದರು.

ಏಪ್ರಿಲ್ 24 ರಂದು ಆಚರಿಸುವ ರಾಷ್ಟ್ರೀಯ ಪಂಚಾಯತ್‌ರಾಜ್ ದಿವಸ್ ಸಂದರ್ಭದಲ್ಲಿ ಎಲ್ಲಾ ಹಂತದ ಪಂಚಾಯತ್‌ರಾಜ್ ಸಂಸ್ಥೆಗಳಿಗೆ ವಿವಿಧ ವಿಭಾಗಗಳಲ್ಲಿ ರಾಷ್ಟ್ರೀಯ ಪ್ರಶಸ್ತಿ ನೀಡಲಾಗುತ್ತಿದೆ.  ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅಭಿವೃದ್ಧಿ ಪಡಿಸಿ ಅನುಷ್ಠಾನಗೊಳಿಸುತ್ತಿರುವ ಗಾಂಧೀ ಸಾಕ್ಷಿ ಕಾಯಕ ತಂತ್ರಾಂಶದ ಮಹತ್ವ ಹಾಗೂ ದಕ್ಷತೆಗೆ ಕೇಂದ್ರ ಸರ್ಕಾರ ಈ ಗೌರವ ನೀಡಿದೆ.

ಇದೇ ಸಂದರ್ಭದಲ್ಲಿ ನಾನಾಜಿ ದೇಖಮುಖ ರಾಷ್ಟ್ರೀಯ ಗೌರವ ಗ್ರಾಮಸಭಾ ಪುರಸ್ಕಾರವನ್ನು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನ ಮಳಿಗೆ ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಪಂಚಾಯತ್ ಅಭಿವೃದ್ಧಿ  ಅಧಿಕಾರಿ ಸ್ವೀಕರಿಸಿದರು.

ದೀನದಯಾಳ್ ಪಂಚಾಯತ್ ಸಶಕ್ತೀಕರಣ ಪುರಸ್ಕಾರವನ್ನು ಕೊಡಗು ಜಿಲ್ಲಾ ಪಂಚಾಯತಿ, ಸಾಗರ, ಪೂತ್ತೂರು ತಾಲ್ಲೂಕು ಪಂಚಾಯತಿಗಳು ಹಾಗೂ ತುಮಕೂರು ಜಿಲ್ಲೆಯ ಕೆಸರಮಡು, ಬೆಳಗಾವಿ ಜಿಲ್ಲೆಯ ಶಿರಗುಪ್ಪಿ, ಕೊಡಗು ಜಿಲ್ಲೆಯ ಪಾಲಿಬೆಟ್ಟ, ಮಡಿಕೇರಿ ತಾಲ್ಲೂಕಿ ಸಂಪಾಜೆ ಗ್ರಾಮ ಪಂಚಾಯತಿಗಳಿಗೆ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರಾದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ  ಮತ್ತು  ಪಂಚಾಯತ್‌ರಾಜ್ ಖಾತೆ ರಾಜ್ಯ ಸಚಿವ ಪರ್ಶೋತ್ತಮ್ ರೂಪಾಲ ಹಾಗೂ ಕೇಂದ್ರ ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಜಿತೇಂದ್ರ ಶಂಕರ್ ಮಾತೂರ್ ಮೊದಲಾದವರು ಭಾಗವಹಿಸಿದ್ದರು.

ಎಂಎಸ್/ಕೆಎಂ